**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–38)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2011ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2011(2012ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 (2012ರ ಕರ್ನಾಟಕ ಅಧಿನಿಯಮ ಸಂಖ್ಯೆ 10)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 (2012ರ ಕರ್ನಾಟಕ ಅಧಿನಿಯಮ ಸಂ. 10)ನ್ನು, ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ
## ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011ರ
## (2012ರ ಕರ್ನಾಟಕ ಅಧಿನಿಯಮ ಸಂಖ್ಯೆ 10) ಉದ್ಧೃತ ಭಾಗ

**XXX XXX XXX**

**3. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ಸ್ಥಳದಲ್ಲಿ ಪ್ರಾಧಿಕಾರವು ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯ ಮಂತ್ರಿಯವರು ಪ್ರಾಧಿಕಾರದ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ಬೆಳಗಾವಿ ಜಿಲ್ಲೆಯ ಉಸ್ತುವಾರಿ ಪ್ರಭಾರದಲ್ಲಿರುವ ಸಚಿವರು ಪ್ರಾಧಿಕಾರದ ಪದನಿಮಿತ್ತ ಉಪಾಧ್ಯಕ್ಷರಾಗಿರತಕ್ಕದ್ದು;

(ಸಿ) ಕನ್ನಡ ಮತ್ತು ಸಂಸ್ಕೃತಿ ಸಚಿವರು - ಪದನಿಮಿತ್ತ ಸದಸ್ಯರು;

(ಡಿ) ಕಂದಾಯ ಸಚಿವರು - ಪದನಿಮಿತ್ತ ಸದಸ್ಯರು;

(ಇ) ಪ್ರವಾಸೋದ್ಯಮ ಸಚಿವರು - ಪದನಿಮಿತ್ತ ಸದಸ್ಯರು;

(ಎಫ್) ಲೋಕೋಪಯೋಗಿ ಸಚಿವರು - ಪದನಿಮಿತ್ತ ಸದಸ್ಯರು;

(ಜಿ) ಕಿತ್ತೂರು ಗ್ರಾಮವು ಭಾಗಶ: ಅಥವಾ ಸಂಪೂರ್ಣವಾಗಿ ಯಾರ ಚುನಾವಣಾ ಕ್ಷೇತ್ರದ ವ್ಯಾಪ್ತಿಯೊಳಗೆ ಬರುತ್ತದೋ ಆ ಕ್ಷೇತ್ರವನ್ನು ಪ್ರತಿನಿಧಿಸುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು - ಸದಸ್ಯರು;

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025